## ಕಾಲೇಜು ಶಿಕ್ಷಣ ಇಲಾಖೆ

ಸಂಖ್ಯೆ:ಕಾಶಿಇ/46/ಯುವನಿಧಿ/2023-24/ವಿ.ವೇ

ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ,
ಬೆಂಗಳೂರು,ದಿನಾಂಕ:03.01.2025.

## ಸುತ್ತೋಲೆ

**ವಿಷಯ:** ಯುವನಿಧಿ ವಿಶೇಷ ನೋಂದಣಿ ಅಭಿಯಾನವನ್ನು ದಿನಾಂಕ:06.01.2025 ರಿಂದ 20.01.2025 ರವರೆಗೆ ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖಾ ವ್ಯಾಪ್ತಿಯ ಕಾಲೇಜುಗಳಲ್ಲಿ ಆಯೋಜಿಸುವ ಕುರಿತು.

**ಉಲ್ಲೇಖ:** ದಿನಾಂಕ:02.01.2025ರ ಕೈಗಾರಿಕ ತರಬೇತಿ ಮತ್ತು ಉದ್ಯೋಗ ಇಲಾಖೆಯ ಆಯುಕ್ತರ ಪತ್ರ ಸಂಖ್ಯೆ: ಕೈತಉ/ಉದ್ಯೋಗ/ಯೋಜನೆ-9/ ವಿವ-96/2024-25.

*****

ಸೂಚಿತ ವಿಷಯಕ್ಕೆ ಸಂಬಂಧಿಸಿದಂತೆ, ಕರ್ನಾಟಕ ಸರ್ಕಾರದ ಖಾತರಿ ಯೋಜನೆಗಳಲ್ಲಿ ಒಂದಾದ ಯುವನಿಧಿ ಯೋಜನೆ ರಾಜ್ಯದ ನಿರುದ್ಯೋಗಿ ಯುವಕ/ಯುವತಿಯರಿಗೆ ನಿರುದ್ಯೋಗಿ ಭತ್ಯೆಯನ್ನು ನೀಡಿ ಸಬಲೀಕರಣಗೊಳಿಸಲು ಜಾರಿಗೊಳಿಸಿದ ಮಹತ್ತರ ಯೋಜನೆಯಾಗಿರುತ್ತದೆ. ಈ ಯೋಜನೆಯಡಿ ನೋಂದಣಿಯಾಗುವ ಪದವಿ/ಸ್ನಾತಕೋತ್ತರ ಪದವೀಧರರಿಗೆ ಮಾಹೆಯಾನ ರೂ.3000/- ಮತ್ತು ಡಿಪ್ಲೋಮಾ(6 ಬೋರ್ಡ್‌ಗಳಿಂದ) ತೇರ್ಗಡೆಯಾದವರಿಗೆ ಮಾಹೆಯಾನ ರೂ.1500/- ನಿರುದ್ಯೋಗ ಭತ್ಯೆಯನ್ನು ನೇರ ನಗದು ವರ್ಗಾವಣೆ ಮೂಲಕ ಪಾವತಿಸಲಾಗುತ್ತಿದೆ.

ಯುವನಿಧಿ ಯೋಜನೆಗೆ ಅತಿ ಹೆಚ್ಚಿನ ಸಂಖ್ಯೆಯಲ್ಲಿ ಅರ್ಹ ಅಭ್ಯರ್ಥಿಗಳನ್ನು ನೋಂದಾಯಿಸಲು **"ಯುವನಿಧಿ ವಿಶೇಷ ನೋಂದಣಿ ಅಭಿಯಾನವನ್ನು ದಿನಾಂಕ:06.01.2025 ರಿಂದ 20.01.2025"**ರವರೆಗೆ ಹಮ್ಮಿಕೊಳ್ಳಲಾಗಿದ್ದು ಅಭ್ಯರ್ಥಿಗಳು ಈ ಕೆಳಕಂಡ ಅರ್ಹತೆಗಳನ್ನು ಹೊಂದಿರಬೇಕಾಗಿದೆ.

- ಕರ್ನಾಟಕದಲ್ಲಿ ವಾಸವಿರುವವರು (ಕನಿಷ್ಠ 06 ವರ್ಷಗಳ ವರೆಗೆ ಪದವಿ/ಸ್ನಾತಕೋತ್ತರ ಪದವಿ ಮತ್ತು ಡಿಪ್ಲೊಮದವರೆಗೆ ಅಧ್ಯಯನ ಮಾಡಿದವರು)
- ತೇರ್ಗಡೆ ಹೊಂದಿರುವ 180 ದಿನಗಳ ನಂತರವೂ ಉದ್ಯೋಗ ದೊರಕದೆ, ಉನ್ನತ ವ್ಯಾಸಂಗಕ್ಕೆ ದಾಖಲಾಗದೆ ಇರುವ ಅಭ್ಯರ್ಥಿಗಳು ಈ ಯೋಜನೆಗೆ ಅರ್ಹರಿರುತ್ತಾರೆ.
- ಸ್ವಯಂ ಉದ್ಯೋಗ ಹೊಂದಿಲ್ಲದ ಅಭ್ಯರ್ಥಿಗಳು.
- ಉನ್ನತ ವಿದ್ಯಾಭ್ಯಾಸ ಮುಂದುವರಿಸದೇ ಇರುವ ಅಭ್ಯರ್ಥಿಗಳು.

ಈ ಹಿನ್ನಲೆಯಲ್ಲಿ ಇಲಾಖಾ ವ್ಯಾಪ್ತಿಯ ಎಲ್ಲಾ ಪದವಿ/ ಸ್ನಾತಕೋತ್ತರ ಪದವಿ, ಇಂಜಿನಿಯರಿಂಗ್ ಹಾಗೂ ಡಿಪ್ಲೋಮ ಕಾಲೇಜುಗಳ ಪ್ರಾಂಶುಪಾಲರುಗಳು 2023 ಹಾಗೂ 2024 ನೇ ಸಾಲಿನಲ್ಲಿ ತಮ್ಮ ಕಾಲೇಜುಗಳಲ್ಲಿ ತೇರ್ಗಡೆ ಹೊಂದಿದ ವಿದ್ಯಾರ್ಥಿಗಳ ನೋಂದಣಿಗಾಗಿ ತಮ್ಮ ಕಾಲೇಜುಗಳಲ್ಲಿ **ಯುವನಿಧಿ ವಿಶೇಷ ನೋಂದಣಿ ಸಹಾಯ ಕೇಂದ್ರಗಳನ್ನು** ತೆರೆದು, ಕೇಂದ್ರಕ್ಕೆ ಅತ್ಯವಶ್ಯಕವಾಗಿ ಬೇಕಾದ ಗಣಕ ಯಂತ್ರ ವ್ಯವಸ್ಥೆ ಹಾಗೂ ಸಿಬ್ಬಂದಿ ನಿಯೋಜನೆ ಮಾಡಿಕೊಳ್ಳಲು ಸೂಚಿಸಲಾಗಿದೆ. ಕಾಲೇಜು ಹಾಗೂ ಸ್ಥಳೀಯ ಮಟ್ಟದಲ್ಲಿ ಬ್ಯಾನರ್/ಪೋಸ್ಟರ್‌ಗಳನ್ನು ಅಳವಡಿಸಿ, ವ್ಯಾಪಕ ಪ್ರಚಾರವನ್ನು ಕೈಗೊಂಡು ಅರ್ಹ ಅಭ್ಯರ್ಥಿಗಳಿಂದ ಗರಿಷ್ಠ ಮಟ್ಟದ ನೋಂದಣಿ ಮಾಡಿಸುವಂತೆ ಕ್ರಮ ವಹಿಸಲು ಸೂಚಿಸಲಾಗಿದೆ.

ಕಾಲೇಜುಗಳಲ್ಲಿ ಪ್ರಾಂಶುಪಾಲರು ಯುವನಿಧಿ ವಿಶೇಷ ನೋಂದಣಿ ಅಭಿಯಾನಕ್ಕಾಗಿ ಕಾಲೇಜಿನ ಪ್ಲೇಸ್‌ಮೆಂಟ್ ಸೆಲ್ ಅಧಿಕಾರಿಗಳು ಹಾಗೂ ಐ.ಟಿ ಕೋ-ಆರ್ಡಿನೇಟರ್ ಗಳಿಗೆ ಉಸ್ತುವಾರಿಯನ್ನು ವಹಿಸಿ ಅರ್ಹ ಅಭ್ಯರ್ಥಿಗಳಿಂದ ಅತಿ ಹೆಚ್ಚು ನೋಂದಣಿ ಮಾಡಿಕೊಳ್ಳಲು ಅನುಕೂಲ ಕಲ್ಪಿಸಲು ಈ ಮೂಲಕ ಸೂಚಿಸಲಾಗಿದೆ.

ಹೆಚ್ಚಿನ ಮಾಹಿತಿಗಾಗಿ ಯುವನಿಧಿ ಯೋಜನೆಯ ವೆಬ್‌ಸೈಟನ್ನು ಸಂಪರ್ಕಿಸುವುದು: https://yuvanidhischeme.in/

**ಆಯುಕ್ತರು**
**ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ**

**ಇವರಿಗೆ,**

1. ಪ್ರಾದೇಶಿಕ ಜಂಟಿ ನಿರ್ದೇಶಕರುಗಳು, ಬೆಂಗಳೂರು, ಮೈಸೂರು, ಶಿವಮೊಗ್ಗ, ಮಂಗಳೂರು, ಧಾರವಾಡ ಮತ್ತು ಕಲಬುರಗಿ – ಸಂಬಂಧಪಟ್ಟ ಕಾಲೇಜುಗಳಿಗೆ ಸೂಕ್ತ ನಿರ್ದೇಶನ ನೀಡಲು ಕೋರಿದೆ.
2. ಇಲಾಖಾ ವ್ಯಾಪ್ತಿಯ ಎಲ್ಲಾ ಪದವಿ ಮತ್ತು ಸ್ನಾತಕೋತ್ತರ ಪದವಿ ಕಾಲೇಜುಗಳ ಪ್ರಾಂಶುಪಾಲರುಗಳಿಗೆ – ಅಗತ್ಯ ಕ್ರಮಕ್ಕಾಗಿ.
3. ಇಲಾಖಾ ವ್ಯಾಪ್ತಿಯ ಎಲ್ಲಾ ಇಂಜಿನಿಯರಿಂಗ್ ಮತ್ತು ಪಾಲಿಟೆಕ್ನಿಕ್ ಕಾಲೇಜುಗಳ ಪ್ರಾಂಶುಪಾಲರುಗಳಿಗೆ – ಅಗತ್ಯ ಕ್ರಮಕ್ಕಾಗಿ.
4. ಮಾಹಿತಿ ಅಧಿಕಾರಿಗಳು, ಮಾಹಿತಿ ಮತ್ತು ತಂತ್ರಜ್ಞಾನ ವಿಭಾಗ, ಕೇಂದ್ರ ಕಛೇರಿ, ಬೆಂಗಳೂರು – ಜಾಲತಾಣದಲ್ಲಿ ಪ್ರಕಟಿಸಲು.
5. ಕಛೇರಿ ಪ್ರತಿ.